## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಪುಣಚ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 245 ಗ್ರಾಪಂಕಾ 2014, ದಿನಾಂಕ:26.06.2014.
2. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/ARE-8/ENQ-418/2014, Dt:11.12.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/ARE-8/ENQ-418/2014, Dt:14.12.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಪುಣಚ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

The charge leveled against the DGO was that, while she was working as Panchayath Development Officer, Punacha Grama Panchayath, Tumbe, Bantwal Taluk, Dakshina Kannada District, she had not taken any action on the application dated:22-02-2011 filed by Sheri. Abdul Azeez(complainant) to remove auto rickshaw stand in front of his shop despite there being direction by the High Court in W.P.No.14737/2011 dated 30-10-2012. Thereby, she failed to maintain herself as unbecoming of a Government servant and committed misconduct within the meaning of Rule 3(1)(i) to (iii) of Karnataka Civil Service(conduct) Rules, 1966.

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಪುಣಚ ಗ್ರಾಮ ಪಂಚಾಯಿತಿ, ಇವರ ವಿರುದ್ಧದ ಆರೋಪವು ಸಾಬೀತಾಗಿಲ್ಲವೆಂದು ವರದಿ ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರಲ್ಲಿನ ವಿಚಾರಣಾಧಿಕಾರಿಯವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ, ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಣಚ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧದ ಆರೋಪವು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿಲ್ಲದ ಹಿನ್ನೆಲೆಯಲ್ಲಿ ಸದರಿ ನೌಕರರ ವಿರುದ್ಧದ ಶಿಸ್ತುಕ್ರಮವನ್ನು ಕೈಬಿಡಲಾಗಿದೆ ಎಂದು ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಸದರಿ ಪ್ರಕರಣದಲ್ಲಿ ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಣಚ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆಗೆ ಸಂಬಂಧಿಸಿದಂತೆ, ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಇವರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರ ವಿರುದ್ಧದ ಶಿಸ್ತುಕ್ರಮವನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:921:ಗ್ರಾಪಂಕಾ2017,**

**ಬೆಂಗಳೂರು, ದಿನಾಂಕ: 11-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಣಚ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರ ವಿರುದ್ಧದ ಆರೋಪವು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿಲ್ಲದ ಕಾರಣ, ಇವರನ್ನು ದೋಷಮುಕ್ತರನ್ನಾಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
6. ಶ್ರೀಮತಿ ಪ್ರೇಮಲತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮಣಚ ಗ್ರಾಮ ಪಂಚಾಯಿತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.